**All India Radio: Bangalore**
**National Bulletin In Kannada**
**29.07.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<>><><*><><<>**

ಮುಖ್ಯಾಂಶಗಳು

**೧. ಸೈಬರ್ ಬೆದರಿಕೆಗಳ ಬಗ್ಗೆ ನಿರಂತರ ಜಾಗರೂಕತೆ ಅಗತ್ಯ- ಪ್ರಧಾನಿ ನರೇಂದ್ರ ಮೋದಿ**

**೨. ರಾಷ್ಟ್ರಪತಿ ಭವನ, ರಾಷ್ಟ್ರದ ಭವನವಾಗಬೇಕು; ಎಲ್ಲಾ ವರ್ಗದ ಸಮಸ್ಯೆಗಳಿಗೆ ಕಿವಿಯಾಗಬೇಕು- ರಾಷ್ಟ್ರಪತಿ ದ್ರೌಪದಿ ಮುರ್ಮು**

**೩. ಮೂರು ವರ್ಷಗಳಲ್ಲಿ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ೭೫ ಸಾವಿರ ಕೋಟಿ ರೂಪಾಯಿ ಬಿಡುಗಡೆ- ಕೇಂದ್ರ ಸಚಿವ ನಿತ್ಯಾನಂದ ರೈ**

**೪. ಕಾಮನ್‌ವೆಲ್ತ್ ಕ್ರೀಡಾಕೂಟ; ಗುಲ್ವಿರ್ ಸಿಂಗ್ ಮತ್ತು ಹರ್ಜಿಂದರ್ ಕೌರ್‌ಗೆ ಬೆಳ್ಳಿ**

**೫. ಶ್ರೀಲಂಕಾ ವಿರುದ್ಧದ ಟೆಸ್ಟ್ ಸರಣಿಗೆ ಭಾರತ ತಂಡ ಪ್ರಕಟ; ಶುಭ್‌ಮನ್ ಗಿಲ್ ನಾಯಕ, ಕನ್ನಡಿಗ ಕೆ.ಎಲ್.ರಾಹುಲ್ ಉಪನಾಯಕ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿಯ ತಮ್ಮ ನಿವಾಸದಲ್ಲಿ ನಿನ್ನೆ ಸರ್ಕಾರದ ಕಾರ್ಯದರ್ಶಿಗಳೊಂದಿಗೆ ಎರಡನೇ ಉನ್ನತ ಮಟ್ಟದ ಸಭೆ ನಡೆಸಿದರು. ಹಣಕಾಸು ಮತ್ತು ಆರ್ಥಿಕತೆ, ವಾಣಿಜ್ಯ ಮತ್ತು ಕೈಗಾರಿಕೆ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಭವಿಷ್ಯದ ಕಾರ್ಯಸೂಚಿಯನ್ನು ಅವರು ಪರಿಶೀಲಿಸಿದರು. ವಿಕಸಿತ ಭಾರತದ ಗುರಿಗಳತ್ತ ಪ್ರಗತಿಯನ್ನು ವೇಗಗೊಳಿಸುವಂತೆ ಅವರು ನಿರ್ದೇಶನ ನೀಡಿದರು. ಅಧಿಕಾರಿಗಳು ಇನ್ನಷ್ಟು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು. ಇಲಾಖೆಗಳು ನಿಕಟ ಸಮನ್ವಯತೆ ಕಾಯ್ದುಕೊಂಡು ಸಮಗ್ರ ಫಲಿತಾಂಶ ನೀಡಬೇಕು. ದೇಶದ ಜನತೆ ಪ್ರತಿಯೊಂದು ನಿರ್ಧಾರ ಮತ್ತು ನೀತಿಯ ಕೇಂದ್ರಬಿಂದುವಾಗಿರಬೇಕು. ಭಾರತ ಮೂಲಸೌಕರ್ಯದಲ್ಲಿ ಗಮನಾರ್ಹ ಹೂಡಿಕೆಗಳನ್ನು ಮಾಡುತ್ತಿರುವಾಗ, ಸ್ಥಳೀಯ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಲು ಮತ್ತು ನಿರ್ಣಾಯಕ ವಲಯಗಳಲ್ಲಿ ದೇಶೀಯ ಸಾಮರ್ಥ್ಯಗಳನ್ನು ನಿರ್ಮಿಸಲು ಸಮಾನ ಆದ್ಯತೆ ನೀಡಬೇಕು ಎಂದು

ಪ್ರಧಾನಿ ಒತ್ತಿ ಹೇಳಿದರು. ಇಂಧನ ಭದ್ರತೆಯು ರಾಷ್ಟ್ರೀಯ ಭದ್ರತೆಯಾಗಿದೆ. ಆರ್ಥಿಕ ಸ್ಥಿರತೆಯು ನಾಗರಿಕರ ಕಲ್ಯಾಣದೊಂದಿಗೆ ನಿಕಟ ಸಂಬಂಧ ಹೊಂದಿದೆ. ನಾವೀನ್ಯತೆ, ವೈವಿಧ್ಯತೆ ಮತ್ತು ವೇಗವರ್ಧಿತ ಸಾಮರ್ಥ್ಯ ಸೃಷ್ಟಿಯ ಮೂಲಕ ಇಂಧನ ವಲಯದಲ್ಲಿ ಸ್ವಾವಲಂಬನೆಗೆ ಒತ್ತು ನೀಡಬೇಕು. ಸೈಬರ್ ಬೆದರಿಕೆಗಳ ವಿರುದ್ಧ ನಿರಂತರ ಜಾಗರೂಕತೆ ಇರಬೇಕು. ಸೈಬರ್ ಭದ್ರತಾ ಪರಿಸರ ವ್ಯವಸ್ಥೆಯಲ್ಲಿ ಯುವ ನಾವೀನ್ಯಕಾರರು ಮತ್ತು ಉದ್ಯಮಿಗಳು ಹೆಚ್ಚಿನ ಪ್ರಮಾಣದಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು. ಇದು ರಾಷ್ಟ್ರವ್ಯಾಪಿ ಆಂದೋಲನವಾಗಿ ವಿಕಸನಗೊಳ್ಳಬೇಕು ಎಂದು ಹೇಳಿದರು. ಬೆಳವಣಿಗೆಯಾಗುತ್ತಿರುವ ಕೈಗಾರಿಕಾ ವಲಯಗಳಿಗೆ ಕೌಶಲ್ಯ ಶಕ್ತಿಯ ಕಾರ್ಯಪಡೆಯನ್ನು ಸಜ್ಜುಗೊಳಿಸಲು ಉದ್ಯಮದ ಸಹಭಾಗಿತ್ವದಲ್ಲಿ ಹೊಸ ಶೈಕ್ಷಣಿಕ ಕೋರ್ಸ್‌ಗಳನ್ನು ಯೋಜಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಲ್ಕು ವರ್ಷಗಳ ಆಡಳಿತಾವಧಿ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ, ಅವರ ಸಾಧನೆಯ ನಾಲ್ಕು ಪುಸ್ತಕಗಳನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ದೆಹಲಿಯಲ್ಲಿ ನಿನ್ನೆ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ರಾಷ್ಟ್ರಪತಿ ಹುದ್ದೆಯು ತಮಗೆ ಗೌರವಕ್ಕಿಂತ ಹೆಚ್ಚಾಗಿ ಒಂದು ಆಳವಾದ ಜವಾಬ್ದಾರಿಯಾಗಿದೆ. ರಾಷ್ಟ್ರಪತಿ ಭವನಕ್ಕೆ ರಾಷ್ಟ್ರಪತಿಗಳಾಗಿ ಬರುವವರು ಕೆಲವೇ ವರ್ಷಗಳ ಅತಿಥಿಗಳು ಮಾತ್ರ. ಆದರೆ ರಾಷ್ಟ್ರಪತಿ ಭವನವು, ರಾಷ್ಟ್ರದ ಭವನ ಆಗಬೇಕು, ಇದು ಎಲ್ಲ ವರ್ಗದ ಸಮಸ್ಯೆಗಳನ್ನು ಕೇಳುವ ಮನೆಯಾಗಬೇಕು, ಸಂಸ್ಕೃತಿಯನ್ನು ಉಳಿಸುವ ಕೇಂದ್ರವಾಗಬೇಕು ಎನ್ನುವ ಕಾರಣದಿಂದ ಈ ನಿಟ್ಟಿನಲ್ಲಿ ಶ್ರಮಿಸುತ್ತಿರುವುದಾಗಿ ಹೇಳಿದರು. ಮಹಿಳೆಯರು ಸ್ವಾವಲಂಬಿಗಳಾಗುವ ಜೊತೆಗೆ ಆತ್ಮವಿಶ್ವಾಸದಿಂದ ಪ್ರಗತಿಯ ಹಾದಿಯಲ್ಲಿ ಮುನ್ನಡೆಯಬೇಕಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರವು, ಬುಡಕಟ್ಟು ಸಮುದಾಯವನ್ನು ಮುಖ್ಯವಾಹಿನಿಗೆ ತರಲು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದು, ಅಭಿವೃದ್ಧಿಯ ಮುಖ್ಯವಾಹಿನಿಯ ಭಾಗವಾಗುವುದರ ಜೊತೆಗೆ ಬುಡಕಟ್ಟು ಸಮುದಾಯದವರು ಸಾಂಸ್ಕೃತಿಕ ಪರಂಪರೆಯನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು.ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮಾತನಾಡಿ, ಕಳೆದ ನಾಲ್ಕು ವರ್ಷಗಳಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಸಾಧನೆಗಳನ್ನು ಬಣ್ಣಿಸಿದರು.

**<>><><*><><<>**

ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರ, ರಾಷ್ಟ್ರೀಯ ವಿಪತ್ತು ನಿಧಿ ಮತ್ತು ರಾಜ್ಯ ವಿಪತ್ತು ನಿಧಿಯಡಿ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ೭೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ಬಿಡುಗಡೆ ಮಾಡಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಲೋಕಸಭೆಗೆ ತಿಳಿಸಿದ್ದಾರೆ. ಲಿಖಿತ ಉತ್ತರ ನೀಡಿರುವ ಅವರು, ರಾಜ್ಯ ಸರ್ಕಾರಗಳು ನೈಸರ್ಗಿಕ ವಿಪತ್ತುಗಳ ಹಿನ್ನೆಲೆಯಲ್ಲಿ ರಾಜ್ಯ ವಿಪತ್ತು ಪ್ರತಿಕ್ರಿಯೆ ನಿಧಿಯಿಂದ ಪರಿಹಾರ ಕ್ರಮಗಳನ್ನು ಕೈಗೊಳ್ಳುತ್ತವೆ. ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಗಳ ಪ್ರಯತ್ನಗಳಿಗೆ ಪೂರಕವಾಗಿದೆ. ಅಗತ್ಯವಾದ ಜಾರಿ ಮತ್ತು ಆರ್ಥಿಕ ಬೆಂಬಲವನ್ನು ಒದಗಿಸುತ್ತದೆ. ತೀವ್ರ ಸ್ವರೂಪದ ವಿಪತ್ತು ಸಂಭವಿಸಿದಲ್ಲಿ, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿಯಿಂದ ಹೆಚ್ಚುವರಿ ಹಣಕಾಸಿನ ನೆರವು ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ.

**<>><><*><><<>**

ಭಾರತೀಯ ಕರಾವಳಿ ಕಾವಲು ಪಡೆ ತನ್ನ ಸಿಬ್ಬಂದಿ ಮತ್ತು ಅವರ ಕುಟುಂಬಗಳಿಗೆ ಎರಡು ಮಹತ್ವದ ನೀತಿ ಸುಧಾರಣೆಗಳನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿನ್ನೆ ಅನಾವರಣಗೊಳಿಸಿದರು. ಬಳಿಕ ರಾಜನಾಥ್ ಸಿಂಗ್ ಮಾತನಾಡಿ, ಅಧಿಕಾರಿಗಳ ಸೇರ್ಪಡೆ ಮತ್ತು ಸೇವಾ ಪರಿಸ್ಥಿತಿಗಳಲ್ಲಿ ಲಿಂಗ ಸಮಾನತೆಯನ್ನು ಉತ್ತೇಜಿಸುವ ಗುರಿಯನ್ನು ಈ ನೀತಿ ಸುಧಾರಣೆಗಳು ಹೊಂದಿವೆ. ಕರ್ತವ್ಯದಲ್ಲಿರುವಾಗ ಕಡಲಲ್ಲಿ ಕಾಣೆಯಾದವರ ಕುಟುಂಬಗಳಿಗೆ ಪರಿಹಾರ ನೀಡುವ ಆಡಳಿತಾತ್ಮಕ ಕಾರ್ಯವಿಧಾನಗಳನ್ನು ಸಹ ಇದು ಸುಗಮಗೊಳಿಸುತ್ತದೆ ಎಂದು ತಿಳಿಸಿದ್ದಾರೆ.

**<>><><*><><<>**

ಕರ್ನಾಟಕ ವಿಧಾನ ಮಂಡಲ ಅಧಿವೇಶನ ಆಗಸ್ಟ್ ೧೩ರಿಂದ ೨೭ರವರೆಗೆ ನಡೆಯಲಿದೆ. ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ ಒಟ್ಟು ೧೦ ದಿನಗಳ ಕಾಲ ಕಲಾಪ ನಡೆಯಲಿದೆ ಎಂದು ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ. ೧೬ನೇ ವಿಧಾನಸಭೆಯ ೧೦ನೇ ಅಧಿವೇಶನ ಆಗಸ್ಟ್ ೧೩ರಂದು ಬೆಳಗ್ಗೆ ೧೧ ಗಂಟೆಗೆ ನಡೆಸಲು ರಾಜ್ಯಪಾಲರು ಸಮ್ಮತಿ ನೀಡಿದ್ದಾರೆ.

**<>><><*><><<>**

ಇಂದು, ವ್ಯಾಸ ಪೂರ್ಣಿಮೆ. ತನ್ನಿಮಿತ್ತ ಗುರು ಪೌರ್ಣಿಮೆಯನ್ನು ನಾಡಿನಾದ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಆಷಾಢ ಮಾಸದ, ಹುಣ್ಣಿಮೆಯ ದಿನ, ಗುರು ಪೌರ್ಣಿಮೆ ಆಚರಿಸುವ ಮೂಲಕ, ಗುರುರೂಪಿ ಶಿಕ್ಷಕರು ಹಾಗೂ ಶ್ರೀರಾಮನನ್ನು ಆಚಾರ್ಯ ಪುರುಷನಾಗಿ ಪೂಜಿಸಲಾಗುತ್ತದೆ.

**<>><><*><><<>**

ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಪಡೆಗಳು ನಿನ್ನೆ ರಾತ್ರಿ ಹಲವಾರು ಖಂಡಾಂತರ ಕ್ಷಿಪಣಿಗಳನ್ನು ಹಾರಿಸಿ, ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ನೆಲೆಗೊಂಡಿರುವ ಅಮೆರಿಕ ಪಡೆಗಳ ಮೇಲೆ ಆಶ್ಚರ್ಯಕರ ದಾಳಿ ನಡೆಸಿವೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಹೇಳಿದೆ. ಎಲ್ಲಾ ಇರಾನಿನ ಕ್ಷಿಪಣಿಗಳನ್ನು ಯಶಸ್ವಿಯಾಗಿ ತಡೆಹಿಡಿಯಲಾಗಿದೆ ಮತ್ತು ಅಮೆರಿಕ ಪಡೆಗಳು ಜಾಗರೂಕವಾಗಿವೆ ಮತ್ತು ಹೆಚ್ಚಿನ ಸನ್ನದ್ಧ ಸ್ಥಿತಿಯಲ್ಲಿವೆ. ಕಳೆದ ೭೨ ಗಂಟೆಗಳಲ್ಲಿ ೩೦ ಕ್ಕೂ ಹೆಚ್ಚು ಡ್ರೋನ್ ದಾಳಿಗಳನ್ನು ಮಾಡಲಾಗಿದೆ ಎಂದು ಅಮೆರಿಕ ಹೇಳಿಕೊಂಡಿದೆ.

**<>><><*><><<>**

೧೦ ಮತ್ತು ೨೦ ರೂಪಾಯಿಗಳ ಪಾಲಿಮರ್ ನೋಟುಗಳನ್ನು ಪರಿಚಯಿಸುವ ಭಾರತೀಯ ರಿಸರ್ವ್ ಬ್ಯಾಂಕಿನ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಲೋಕಸಭೆಗೆ ತಿಳಿಸಿದ್ದಾರೆ.ಲಿಖಿತ ಉತ್ತರ ನೀಡಿರುವ ಅವರು, ಸದ್ಯ ಪ್ರಯೋಗಾರ್ಥವಾಗಿ ಹತ್ತು ಮತ್ತು ಇಪ್ಪತ್ತು ರೂಪಾಯಿ ಮುಖಬೆಲೆಯ ಒಂದು ಶತಕೋಟಿ ಸಂಖ್ಯೆಯ ನೋಟುಗಳ ಮುದ್ರಣಕ್ಕೆ ಅನುಮತಿ ನೀಡಲಾಗಿದೆ. ನಂತರ ಈ ಎರಡು ಮುಖಬೆಲೆಯ ಪಾಲಿಮರ್ ನೋಟುಗಳನ್ನು ನಿಯಮಿತವಾಗಿ ವಿತರಿಸಲಾಗುವುದು ಎಂದು ಅವರು ಹೇಳಿದ್ದಾರೆ. ಅಂತಾರಾಷ್ಟ್ರೀಯ ಅಧ್ಯಯನಗಳ ಪ್ರಕಾರ, ಪಾಲಿಮರ್ ನೋಟುಗಳ ಜೀವಿತಾವಧಿಯು ಕಾಗದದ ನೋಟುಗಳಿಗಿಂತ ಹೆಚ್ಚಾಗಿದೆ. ಪಾಲಿಮರ್ ನೋಟುಗಳ ಪರಿಚಯವು ಪ್ರಸ್ತುತ ಪ್ರಾಥಮಿಕ ಹಂತದಲ್ಲಿದೆ ಮತ್ತು ಈ ನೋಟುಗಳನ್ನು ನಿಯಮಿತವಾಗಿ ವಿತರಿಸಿದ ನಂತರವೇ ಡಿಜಿಟಲ್ ಪಾವತಿಗಳ ಮೇಲಿನ ಪರಿಣಾಮವನ್ನು ಖಚಿತಪಡಿಸಿಕೊಳ್ಳಬಹುದು ಎಂದು ಹೇಳಿದ್ದಾರೆ.

**<>><><*><><<>**

ಗ್ಲ್ಯಾಸ್ಗೋದಲ್ಲಿ ನಡೆಯುತ್ತಿರುವ ಕಾಮನ್‌ವೆಲ್ತ್ ಕ್ರೀಡಾಕೂಟದ ಪುರುಷರ ೧೦ ಸಾವಿರ ಮೀಟರ್ ಓಟದ ಸ್ಪರ್ಧೆಯಲ್ಲಿ ಗುಲ್ವೀರ್ ಸಿಂಗ್ ಬೆಳ್ಳಿ ಪದಕ ಗೆದ್ದಿದ್ದಾರೆ. ಈ ವಲಯದಲ್ಲಿ ಪದಕ ಗೆದ್ದ ಮೊದಲ ಭಾರತೀಯ ಅಥ್ಲೀಟ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹಾಲಿ ಏಷ್ಯನ್ ಚಾಂಪಿಯನ್ ಸ್ಕಾಟ್ಸ್‌ಟೌನ್ ಕ್ರೀಡಾಂಗಣದಲ್ಲಿ ೨೭ ನಿಮಿಷ ೪೯.೭೮ ಸೆಕೆಂಡ್‌ಗಳಲ್ಲಿ ಗುರಿ ತಲುಪಿ,

ಆಸ್ಟ್ರೇಲಿಯಾದ ಕೈ ರಾಬಿನ್ಸನ್ ಅವರನ್ನು ಹಿಂಬಾಲಿಸಿದರು. ಹರ್ಜಿಂದರ್ ಕೌರ್ ಮಹಿಳೆಯರ ೬೯ ಕೆಜಿ ವೇಟ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದರು. ೨೯ ವರ್ಷದ ಕೌರ್ ಒಟ್ಟು ಎಂಟು ವೇಟ್‌ಲಿಫ್ಟಿಂಗ್ ಸ್ಪರ್ಧೆಗಳಲ್ಲಿ ೨೨೭ ಕೆಜಿ ಭಾರ ಎತ್ತುವ ಮೂಲಕ ಭಾರತಕ್ಕೆ ಏಳನೇ ಪದಕವನ್ನು ತಂದುಕೊಟ್ಟಿದ್ದಾರೆ. ೨೦೨೨ ರಲ್ಲಿ ಬರ್ಮಿಂಗ್ಹ್ಯಾಮ್‌ನಲ್ಲಿ ಕಂಚು ಗೆದ್ದಿದ್ದ ಹರ್ಜಿಂದರ್ ಅವರಿಗೆ ಸತತ ಎರಡನೇ ಸಿಡಬ್ಲ್ಯುಜಿ ಪದಕ ಇದಾಗಿದೆ. ಏತನ್ಮಧ್ಯೆ, ನಾಲ್ವರು ಭಾರತೀಯ ಬಾಕ್ಸರ್‌ಗಳು ಕಂಚಿನ ಪದಕಗಳನ್ನು ಗೆದ್ದಿದ್ದಾರೆ, ಗ್ಲ್ಯಾಸ್ಗೋ ಕ್ರೀಡಾಕೂಟದಲ್ಲಿ ಭಾರತ ೨ ಚಿನ್ನ, ೭ ಬೆಳ್ಳಿ ಮತ್ತು ೩ ಕಂಚು ಸೇರಿದಂತೆ ೧೨ ಪದಕಗಳನ್ನು ಗಳಿಸಿದೆ.

**<>><><*><><<>**

ಮುಂದಿನ ತಿಂಗಳು ೧೫ ರಿಂದ ಆರಂಭವಾಗಲಿರುವ ಶ್ರೀಲಂಕಾ ವಿರುದ್ಧದ ಎರಡು ಪಂದ್ಯಗಳ ಟೆಸ್ಟ್ ಸರಣಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ, ನಿನ್ನೆ ೧೫ ಸದಸ್ಯರ ತಂಡವನ್ನು ಪ್ರಕಟಿಸಿದೆ. ಶುಭಮನ್ ಗಿಲ್ ನಾಯಕತ್ವದ ತಂಡದಲ್ಲಿ ಕನ್ನಡಿಗ ಕೆಎಲ್ ರಾಹುಲ್ ಉಪನಾಯಕರಾಗಿ ಆಯ್ಕೆಯಾಗಿದ್ದಾರೆ. ಸರಣಿಯ ಮೊದಲ ಟೆಸ್ಟ್ ಪಂದ್ಯ ಆಗಸ್ಟ್ ೧೫ ರಿಂದ ಗಾಲೆಯಲ್ಲಿ ಆರಂಭವಾಗಲಿದ್ದು, ನಂತರ ಎರಡನೇ ಮತ್ತು ಕೊನೆಯ ಟೆಸ್ಟ್ ಆಗಸ್ಟ್ ೨೩ ರಿಂದ ಕೊಲಂಬೊದಲ್ಲಿ ನಡೆಯಲಿದೆ. ಪ್ರಸ್ತುತ ಡಬ್ಲ್ಯೂಟಿಸಿ ಅಂಕಪಟ್ಟಿಯಲ್ಲಿ ಭಾರತ ಐದನೇ ಸ್ಥಾನದಲ್ಲಿದ್ದರೆ, ಶ್ರೀಲಂಕಾ ಆರನೇ ಸ್ಥಾನದಲ್ಲಿದೆ, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್ ಮೊದಲ ಎರಡು ಸ್ಥಾನಗಳನ್ನು ಪಡೆದುಕೊಂಡಿವೆ.

**<>><><*><><<>**

ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ ಎಂಬ ಮೂರು ಹೊಸ ಕ್ರಿಮಿನಲ್ ಕಾನೂನುಗಳು ನಾಗರಿಕ ಕೇಂದ್ರಿತ, ಹೆಚ್ಚು ಸುಲಭವಾಗಿ ಪ್ರವೇಶಿಸಬಹುದಾದ ಮತ್ತು ಪರಿಣಾಮಕಾರಿ ನ್ಯಾಯ ವ್ಯವಸ್ಥೆಯನ್ನು ಒದಗಿಸುವತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಲೋಕಸಭೆಗೆ ನಿನ್ನೆ ತಿಳಿಸಿದ್ದಾರೆ. ಲಿಖಿತ ಉತ್ತರ ನೀಡಿರುವ ಅವರು, ಹೊಸ ಕಾನೂನುಗಳಲ್ಲಿ ಮಾಡಲಾದ ಪ್ರಮುಖ ನಿಬಂಧನೆಗಳು ಶಿಕ್ಷೆಗಿಂತ ನ್ಯಾಯದ ಮೇಲೆ ಕೇಂದ್ರೀಕರಿಸುತ್ತವೆ. ಭಾರತೀಯ ನ್ಯಾಯ ಸಂಹಿತೆ, ೨೦೨೩ ರಲ್ಲಿ, ಅಪ್ರಾಪ್ತ ವಯಸ್ಕರ ಮೇಲಿನ ಅತ್ಯಾಚಾರದ ಅಪರಾಧಕ್ಕೆ ಮರಣದಂಡನೆಯವರೆಗೆ ಕಠಿಣ ಶಿಕ್ಷೆಯನ್ನು ನೀಡಲಾಗಿದೆ. ಅಪ್ರಾಪ್ತ ವಯಸ್ಕರ ಮೇಲಿನ ಸಾಮೂಹಿಕ ಅತ್ಯಾಚಾರದ ಅಪರಾಧಕ್ಕೆ ಜೀವಾವಧಿ ಅಥವಾ ಮರಣದಂಡನೆ ಶಿಕ್ಷೆ ವಿಧಿಸಬಹುದು ಎಂದು ಹೇಳಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಗಂಟೆಗೆ ><><<>